ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	863
ಮಾನ್ಯ ಸದಸ್ಯರ ಹೆಸರು	:	ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ	:	20.09.2021
ಉತ್ತರಿಸುವ ಸಚಿವರು	:	ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಸಚಿವರು

ಪ್ರ. ಸಂ	ಪ್ರಶ್ನೆ	ಉತ್ತರ
ಅ)	2007ನೇ ಸಾಲಿನ ನಂತರ ಸರ್ಕಾರಿ ಪಾಲಿಟೆಕ್ನಿಕ್ ಗಳಿಗೆ ನೇಮಕವಾದ ಉಪನ್ಯಾಸಕರ ಸಂಖ್ಯೆ ಎಷ್ಟು;	ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿನ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ 2007ನೇ ಸಾಲಿನ ನಂತರದಲ್ಲಿ ಒಟ್ಟು 1312 ಉಪನ್ಯಾಸಕರುಗಳನ್ನು ನೇಮಕ ಮಾಡಿಕೊಳ್ಳಲಾಗಿದೆ.
ಆ)	2011ರಲ್ಲಿ ಜಾರಿಯಾದ AICTE 6ನೇ ವೇತನ ಶ್ರೇಣಿ ನಿಯಮಗಳ ಪ್ರಕಾರ 2007 ರಿಂದ ನೇಮಕವಾದ ಎಷ್ಟು ಉಪನ್ಯಾಸಕರಿಗೆ AGP (Academic Grade Pay) ಮಂಜೂರು ಮಾಡಲಾಗಿದೆ;	ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ 81 ಸರ್ಕಾರಿ ಪಾಲಿಟೆಕ್ನಿಕ್‌ಗಳು ಅಸ್ತಿತ್ವದಲ್ಲಿದ್ದು, 2007ನೇ ಸಾಲಿನ ನಂತರದಲ್ಲಿ ಸುಮಾರು 475 ಉಪನ್ಯಾಸಕರುಗಳಿಗೆ ವಿವಿಧ ಹಂತಗಳ ಎ.ಜಿ.ಪಿ. ಮಂಜೂರು ಮಾಡಲಾಗಿರುತ್ತದೆ.
ಇ)	AGP ಮಂಜೂರು ಮಾಡಿರದ ಉಪನ್ಯಾಸಕರ ವಿಷಯದಲ್ಲಿ ಸರ್ಕಾರದ ನಿಲುವು ಏನು;	ಸರ್ಕಾರದ ಆದೇಶ ಸಂಖ್ಯೆ: ಇಡಿ 167 ಡಿಟಿಇ 2017, ದಿನಾಂಕ:10.11.2020ರಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಬರುವ ಸರ್ಕಾರಿ/ ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿನ ಬೋಧಕ ಸಿಬ್ಬಂದಿಗಳಿಗೆ ಸಿ.ಎ.ಎಸ್ ಯೋಜನೆ ಆಧಾರಿತ ವೃತ್ತಿ ಪದೋನ್ನತಿ ಸೌಲಭ್ಯಗಳನ್ನು All India Council for Technical Education (Career Advancement scheme for the teachers and other Academic staff in Technical Institutions) (Diploma) Regulations, 2012ರ ದಿನಾಂಕ:08.11.2012ರಲ್ಲಿನ ನಿಯಮಗಳಲ್ಲಿ ವಿಧಿಸಿರುವ

		ಎ.ಪಿ.ಐ ಆಧಾರಿತ ಅಂಕಗಳ ಪರಿಗಣನೆಯಿಂದ ದಿನಾಂಕ:07.11.2015ರವರೆಗೆ ವಿನಾಯಿತಿ ನೀಡಿ ಆದೇಶಿಸಲಾಗಿದೆ. ಉಳಿದಂತೆ 2011ರ AICTE ಅಧಿಸೂಚನೆಯಲ್ಲಿನ ಇತರೆ ಷರತ್ತುಗಳು ಯಥಾವತ್ತಾಗಿ ಮುಂದುವರೆಸುತ್ತಾ ಇತರೆ ಅರ್ಹತಾ. ಮಾನದಂಡಗಳನ್ನು ಕಡ್ಡಾಯವಾಗಿ ಅಳವಡಿಸಲು ಆದೇಶಿಸಲಾಗಿದೆ. ಸದರಿ ಆದೇಶವನ್ನು ಪ್ರಶ್ನಿಸಿ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ ದಾಖಲಾಗಿರುವ ರಿಟ್ ಅರ್ಜಿ ಸಂಖ್ಯೆ:8484/2020 (S-RES)ರಲ್ಲಿ ಮಾನ್ಯ ನ್ಯಾಯಾಲಯವು ದಿನಾಂಕ:04.12.2020ರಂದು ನೀಡಿರುವ ಮಧ್ಯಂತರ ಆದೇಶದಲ್ಲಿ ಪಾಲಿಟೆಕ್ನಿಕ್ ಬೋಧಕ ಸಿಬ್ಬಂದಿಗಳಿಗೆ ಸಿ.ಎ.ಎಸ್ ಅಡಿಯಲ್ಲಿ ಸೌಲಭ್ಯಗಳನ್ನು ಮಂಜೂರು ಮಾಡಲು ನಿಯಮಗಳನ್ನು ರೂಪಿಸಿರುವ 2012ರ ಎ.ಐ.ಸಿ.ಟಿ.ಇ ಸಿ.ಎ.ಎಸ್ ರೆಗ್ಯುಲೇಷನ್ ಅನ್ನು ಅನುಷ್ಠಾನಗೊಳಿಸಿದ ಸರ್ಕಾರದ ಆದೇಶ ಸಂಖ್ಯೆ:ಇಡಿ 167 ಡಿಟಿಇ 2017, ದಿನಾಂಕ:10.11.2020ಕ್ಕೆ ತಡೆಯಾಜ್ಞೆ ನೀಡಿರುವುದರಿಂದ ಎ.ಜಿ.ಪಿ. ಸೌಲಭ್ಯಗಳನ್ನು ಮಂಜೂರು ಮಾಡಿರುವುದಿಲ್ಲ,
ಈ)	AGP ಮಂಜೂರಾಗದ ಕಾರಣದಿಂದ ಹತ್ತು ವರ್ಷಗಳ ನಂತರವೂ ಒಂದೂ ವೇತನ ಬಡ್ತಿ ಪಡೆಯಲಾಗದ ಉಪನ್ಯಾಸಕರ ಸಮಸ್ಯೆ ಬಗೆಹರಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?	ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ದಿನಾಂಕ:04.12.2020ರಂದು ಎ.ಜಿ.ಪಿ. ಸೌಲಭ್ಯಗಳನ್ನು ಮಂಜೂರು ಮಾಡಲು ಸರ್ಕಾರವು ಹೊರಡಿಸಿರುವ ಆದೇಶ ಸಂಖ್ಯೆ:ಇಡಿ 167 ಡಿಟಿಇ 2017, ದಿನಾಂಕ: 10.11.2020ಕ್ಕೆ ತಡೆಯಾಜ್ಞೆ ನೀಡಿರುವುದರಿಂದ ಮಾನ್ಯ ನ್ಯಾಯಾಲಯವು ತಡೆಯಾಜ್ಞೆಯನ್ನು ತೆರವುಗೊಳಿಸಿದ ನಂತರ ಮಾನ್ಯ ನ್ಯಾಯಾಲಯದ ಆದೇಶದಂತೆ ನಿಯಮಾನುಸಾರ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು.

ಇಡಿ 69 ಟಿಪಿಇ 2021

(ಡಾ॥ ಅಶ್ವತ್ಥನಾರಾಯಣ್.ಸಿ.ಎನ್)
ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ,
ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಸಚಿವರು